## ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: | | 645 |
| ಮಾನ್ಯ ಸದಸ್ಯರ ಹೆಸರು | | ಶ್ರೀ ಮಂಜುನಾಥ್ ಭಂಡಾರಿ<br>(ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು) |
| ಉತ್ತರಿಸುವ ಸಚಿವರು | | ಉನ್ನತ ಶಿಕ್ಷಣ ಸಚಿವರು |
| ಉತ್ತರಿಸಬೇಕಾದ ದಿನಾಂಕ | | 19-09-2022 |
| **ಪ್ರಶ್ನೆ** | | **ಉತ್ತರ** |
| (ಅ) | ರಾಷ್ಟ್ರೀಯ ಶಿಕ್ಷಣ ನೀತಿ 2020 ನಿಯಮಾವಳಿಯಂತೆ ಮುಂದಿನ 5 ವರ್ಷಗಳಲ್ಲಿ, ಬೋಧನೆ, ಕಲಿಕೆ, ಸಂಶೋಧನೆ ಮತ್ತು ನಾವೀನ್ಯತೆಗಳಲ್ಲಿ ಸಮತೋಲನ ಕಾಯ್ದುಕೊಂಡು, ಬಹುಶಾಸ್ತ್ರೀಯ ಕೋರ್ಸುಗಳನ್ನು ಪ್ರಾರಂಭಿಸುವ, ಅತ್ಯುತ್ತಮ ಖಾಸಗೀ ಶಿಕ್ಷಣಸಂಸ್ಥೆಗಳಿಗೆ ಪ್ರೋತ್ಸಾಹ ನೀಡಲು ಇಲಾಖೆಯು ಯಾವ ರೀತಿಯ ಕ್ರಿಯಾಯೋಜನೆ ಅಳವಡಿಸಿಕೊಂಡಿದೆ; ಇದಕ್ಕಾಗಿ ಮೀಸಲಿಟ್ಟಿರುವ ಅನುದಾನವೆಷ್ಟು; (ಮಾಹಿತಿ ನೀಡುವುದು) | ರಾಷ್ಟ್ರೀಯ ಶಿಕ್ಷಣ ನೀತಿಯನ್ನು ಜಾರಿಗೆ ತರುವ ಮುನ್ನ ಕಾರ್ಯಪಡೆಯನ್ನು ರಚಿಸಲಾಗಿದ್ದು, ಕಾರ್ಯಪಡೆಯ ಅನುಷ್ಠಾನ ವರದಿಯಂತೆ ಸಚಿವ ಸಂಪುಟದ ಅನುಮೋದನೆಯಾಗಿರುತ್ತದೆ. ರಾಷ್ಟ್ರೀಯ ಶಿಕ್ಷಣ ನೀತಿಯನ್ನು ಜಾರಿಗೆ ತರುವ ಮುನ್ನ ಸಾಧಕ-ಭಾಧಕಗಳ ಬಗ್ಗೆ ಚರ್ಚಿಸಿ ನಿರ್ಧರಿಸಲಾಗಿದೆ ಹಾಗೂ ವಿಷಯ ತಜ್ಞರು ಹಾಗೂ ವಿಶ್ವವಿದ್ಯಾಲಯಗಳ ಕುಲಪತಿಗಳು, ಶಾಲಾ-ಕಾಲೇಜುಗಳ ಪ್ರಾಂಶುಪಾಲರು ಮತ್ತು ಬೋಧಕ ಸಿಬ್ಬಂದಿ ವರ್ಗದವರೊಂದಿಗೆ ವಿಸ್ತೃತವಾಗಿ ಚರ್ಚಿಸಿ/ ಸಮಾಲೋಚಿಸಿ: ರಾಷ್ಟ್ರೀಯ ಶಿಕ್ಷಣ ನೀತಿಯನ್ನು ರಾಜ್ಯದಲ್ಲಿ ಅನುಷ್ಠಾನಗೊಳಿಸಲು ತೀರ್ಮಾನಿಸಿ ಆದೇಶಿಸಿದೆ. ಹತ್ತು ವರ್ಷಗಳ ಕಾಲದ ಯೋಜನೆಯ ಪ್ರಾರಂಭಕ್ಕೆ ಬೇಕಾದ ಸಿದ್ಧತೆ ಮಾಡಿಕೊಳ್ಳಲಾಗಿದೆ.<br><br>ಕರ್ನಾಟಕ ರಾಜ್ಯ ಉನ್ನತ ಪರಿಷತ್ತಿನ ಸಹಯೋಗದೊಂದಿಗೆ ರಾಜ್ಯದ ಎಲ್ಲಾ ವಿಶ್ವವಿದ್ಯಾಲಯಗಳನ್ನು ನೋಡಲ್ ಏಜೆನ್ಸಿಗಳನ್ನಾಗಿ ಗುರುತಿಸಲಾಗಿದೆ. ಸದರಿ ವಿಶ್ವವಿದ್ಯಾಲಯಗಳ ಅಡಿಯಲ್ಲಿ ಬರುವ ಕಾಲೇಜುಗಳಲ್ಲಿ ರಾಷ್ಟ್ರೀಯ ಶಿಕ್ಷಣ ನೀತಿಯನ್ನು ಸರ್ಕಾರದ ಹಾಗೂ ಯುಜಿಸಿ ಮಾರ್ಗಸೂಚಿಗಳನುಸಾರ ಜಾರಿಗೆ ತರಲು ಹಲವಾರು ಕಾರ್ಯಕ್ರಮಗಳನ್ನು, ಸೆಮಿನಾರ್, ಕಾರ್ಯಗಾರ, ತರಬೇತಿ, ವಿಷಯ ತಜ್ಞರ ಮೂಲಕ ಕೈಗೊಳ್ಳಲಾಗುತ್ತಿದೆ.<br><br>ಆದ್ದರಿಂದ, ತರಾತುರಿಯಲ್ಲಿ ರಾಷ್ಟ್ರೀಯ ಶಿಕ್ಷಣ ನೀತಿಯನ್ನು ಜಾರಿಗೆ ತರುತ್ತಿಲ್ಲ. ಹೊಸ ರಾಷ್ಟ್ರೀಯ ಶಿಕ್ಷಣ ನೀತಿ ವಿದ್ಯಾರ್ಥಿ ಸ್ನೇಹಿಯಾಗಿ ವಿದ್ಯಾರ್ಥಿಗಳ ಸರ್ವಾಂಗೀಣ ಅಭಿವೃದ್ಧಿಗೆ ಒತ್ತು ಕೊಡುತ್ತದೆ. ಅಂದರೆ, ಅವರ ಸಂಪೂರ್ಣ ವ್ಯಕ್ತಿತ್ವ ರೂಪಿಸುವುದಲ್ಲದೇ ಅವರನ್ನು ಉದ್ಯೋಗಾರ್ಹರನ್ನಾಗಿ ಮಾಡಲು ಒತ್ತು ಕೊಡುತ್ತದೆ. ಅದು ಉನ್ನತ ಶಿಕ್ಷಣ ಕ್ಷೇತ್ರದಲ್ಲಿ ಅಮೂಲಾಗ್ರ ಬದಲಾವಣೆ ತಂದು ಉನ್ನತ ಶಿಕ್ಷಣವನ್ನು ಜಾಗತಿಕ ಮಟ್ಟಕ್ಕೆ ಕೊಂಡೊಯ್ಯುವ ಆಶಯವನ್ನಿಟ್ಟುಕೊಂಡಿದೆ. ಅದು ಪ್ರವೇಶ, ಸಮಾನತೆ ಮತ್ತು ಒಳಗೊಳ್ಳುವಿಕೆಗೂ (access, equity, and inclusiveness) ಒತ್ತು ಕೊಡುತ್ತದೆ.<br><br>ಪ್ರಸಕ್ತ ಎರಡನೇ ಸಾಲಿನಲ್ಲಿ ಅವಶ್ಯವಿರುವ ಎಲ್ಲಾ ಕ್ರಮಗಳನ್ನು ವಹಿಸಲಾಗಿದೆ. ಉದಾ: ಪಠ್ಯ ಕ್ರಮಗಳ ಕುರಿತು ಹಲವಾರು ವಿಷಯವಾರು ಸಮಿತಿಗಳು ಮಾದರಿ ಪಠ್ಯಕ್ರಮಗಳನ್ನು ರಚಿಸಿ ವಿಶ್ವವಿದ್ಯಾಲಯಗಳಿಗೆ ಹಾಗೂ ಅದರ ಅಧೀನದಲ್ಲಿ ಬರುವ ಕಾಲೇಜುಗಳಲ್ಲಿ ಜಾರಿಗೆ ತರಲು ಕ್ರಮವಹಿಸಲಾಗಿದೆ. |

| | | |
|---|---|---|
| | | ವಿಶ್ವವಿದ್ಯಾಲಯಗಳಲ್ಲಿ ಮತ್ತು ಕಾಲೇಜುಗಳಲ್ಲಿ (ರಾಜ್ಯ ಸರ್ಕಾರ/ಖಾಸಗಿ) ಎನ್.ಇ.ಪಿ ಜಾರಿಗೆ ತರುವ ನಿಟ್ಟಿನಲ್ಲಿ ಹಲವಾರು ಸೆಮಿನಾರ್‌ಗಳನ್ನು ನಡೆಸಿ ಬೋಧಕ ವರ್ಗಕ್ಕೆ ಸಾಕಷ್ಟು ಮಾಹಿತಿ ಮತ್ತು ತಿಳುವಳಿಕೆ ನೀಡಲಾಗಿದೆ. ಇದಲ್ಲದೇ, Karnataka State Higher Education Academy, Dharwad, ದಿಂದ ರಾಜ್ಯದ ಎಲ್ಲಾ ಬೋಧಕರಿಗೆ ಹಂತ ಹಂತವಾಗಿ ತರಬೇತಿ ನೀಡಲು ವ್ಯವಸ್ಥೆ ಮಾಡಲಾಗಿದೆ ಮತ್ತು ಹಲವು ವಿಶ್ವವಿದ್ಯಾಲಯಗಳಲ್ಲಿರುವ ಮಾನವ ಸಂಪನ್ಮೂಲ ಅಭಿವೃದ್ಧಿ ಕೇಂದ್ರಗಳ (ಹಿಂದಿನ Academic Staff College) ಮುಖಾಂತರ ತರಬೇತಿ ನೀಡಲು ಕ್ರಮವಹಿಸಲಾಗಿದೆ.<br><br>ಮುಂದುವರೆದು, ರಾಷ್ಟ್ರೀಯ ಶಿಕ್ಷಣ ನೀತಿ 2020ರ ನಿಯಮಾವಳಿಯಂತೆ ಅತ್ಯುತ್ತಮ ಖಾಸಗಿ ಶಿಕ್ಷಣ ಸಂಸ್ಥೆಗಳಿಗೆ ಪ್ರೋತ್ಸಾಹ ನೀಡಲು ರಾಜ್ಯ ವಲಯದ ಆಯ-ವ್ಯಯದಲ್ಲಿ ಯಾವುದೇ ಅನುದಾನವನ್ನು ಮೀಸಲಿಟ್ಟಿರುವುದಿಲ್ಲ. |
| (ಆ) | ರಾಜ್ಯದಲ್ಲಿ ಉನ್ನತ ಶಿಕ್ಷಣ ಸಂಸ್ಥೆಗಳಿಗೆ ಅನುದಾನ ನೀಡುವ ಸರ್ಕಾರಿ ಏಜೆನ್ಸಿಗಳಾವುವು ಹಾಗೂ ಅನುದಾನ ಬಿಡುಗಡೆಗೊಳಿಸಲು ಅನುಸರಿಸುವ ಕಾರ್ಯವಿಧಾನಗಳಾವುವು; (ಸಮಗ್ರ ಮಾಹಿತಿ ನೀಡುವುದು) | ರಾಜ್ಯದಲ್ಲಿನ ಉನ್ನತ ಶಿಕ್ಷಣ ಸಂಸ್ಥೆಗಳಿಗೆ ಆಯ-ವ್ಯಯದಲ್ಲಿ ನಿಗಧಿಪಡಿಸಿದ ಅನುದಾನವನ್ನು ರಾಜ್ಯ ಸರ್ಕಾರ ಹಾಗೂ ಕೇಂದ್ರ ಪುರಸ್ಕೃತ ಯೋಜನೆಯಡಿ ಅನುಮೋದನೆ ಯಾಗಿರುವ ಕಾರ್ಯಕ್ರಮಗಳಿಗೆ ಕೇಂದ್ರ ಸರ್ಕಾರದ ನಿಯಮಾವಳಿಗಳಂತೆ ಕೇಂದ್ರ ಸರ್ಕಾರ ರಾಜ್ಯ ಸರ್ಕಾರದ ಮೂಲಕ ಬಿಡುಗಡೆ ಮಾಡುತ್ತಿದೆ. ಈ ಅನುದಾನವನ್ನು ಪ್ರಚಲಿತ ನಿಯಮಗಳಂತೆ ರಾಜ್ಯ ಸರ್ಕಾರವು ಬಿಡುಗಡೆ ಮಾಡುತ್ತಿದೆ. |
| (ಇ) | ರಾಷ್ಟ್ರೀಯ ಶಿಕ್ಷಣ ನೀತಿ 2020ರಂತೆ ರಾಜ್ಯದಲ್ಲಿ ಖಾಸಗಿ ಉನ್ನತ ಶಿಕ್ಷಣ ಸಂಸ್ಥೆಗಳ ಮೂಲಭೂತ ಸೌಲಭ್ಯಗಳನ್ನು ಉನ್ನತೀಕರಿಸಲು, ಖಾಸಗಿ ಕೈಗಾರಿಕೆಗಳಿಂದ ಸಂಗ್ರಹಿಸಿದ ಸಿಎಸ್‌ಆರ್ ನಿಧಿಯನ್ನು ಬಳಸಲು ಸರ್ಕಾರದ ಕಾರ್ಯ ಯೋಜನೆಯೇನು; (ಸಮಗ್ರ ಮಾಹಿತಿ ನೀಡುವುದು) | ರಾಜ್ಯದಲ್ಲಿ ಖಾಸಗಿ ಉನ್ನತ ಶಿಕ್ಷಣ ಸಂಸ್ಥೆಗಳ ಮೂಲಭೂತ ಸೌಲಭ್ಯಗಳನ್ನು ಉನ್ನತೀಕರಿಸಲು, ಖಾಸಗಿ ಕೈಗಾರಿಕೆಗಳಿಂದ ಸಂಗ್ರಹಿಸಿದ ಸಿಎಸ್‌ಆರ್ ನಿಧಿಯನ್ನು ಬಳಸಲು ಸರ್ಕಾರದಿಂದ ಕಾರ್ಯ ಯೋಜನೆಯನ್ನು ರೂಪಿಸಲಾಗುತ್ತಿದೆ. |
| (ಈ) | ಸರ್ಕಾರಿ ಶಿಕ್ಷಣ ಸಂಸ್ಥೆಗಳನ್ನು ಹೊರತುಪಡಿಸಿ ಖಾಸಗಿ ಉನ್ನತ ಶಿಕ್ಷಣ ಸಂಸ್ಥೆಗಳ ಉನ್ನತೀಕರಣಕ್ಕೆ ಬಿಡುಗಡೆಯಾದ ಅನುದಾನವೆಷ್ಟು; ಯಾವ ಸಂಸ್ಥೆಗಳಿಗೆ ಈವರೆಗೆ ಹಂಚಿಕೆ ಮಾಡಲಾಗಿದೆ? (ಮಾಹಿತಿ ನೀಡುವುದು) | ರಾಜ್ಯ ಹಾಗೂ ಕೇಂದ್ರ ವಲಯದಿಂದ ಖಾಸಗಿ ಉನ್ನತ ಶಿಕ್ಷಣ ಸಂಸ್ಥೆಗಳ ಉನ್ನತೀಕರಣಕ್ಕೆ ಯಾವುದೇ ಅನುದಾನ ಬಿಡುಗಡೆಯಾಗಿರುವುದಿಲ್ಲ. ಆದ್ದರಿಂದ, ಸಂಸ್ಥೆಗಳಿಗೆ ಹಂಚಿಕೆ ಮಾಡುವ ಪ್ರಶ್ನೆ ಉದ್ಭವಿಸುವುದಿಲ್ಲ. |

**ಸಂಖ್ಯೆ: ಇಡಿ 258 ಯುಎನ್‌ಇ 2022**

**(ಡಾ: ಅಶ್ವಥ್ ನಾರಾಯಣ ಸಿ.ಎನ್.)**
ಉನ್ನತ ಶಿಕ್ಷಣ, ಐಟಿ - ಬಿಟಿ, ವಿಜ್ಞಾನ
ಮತ್ತು ತಂತ್ರಜ್ಞಾನ, ವಿದ್ಯುನ್ಮಾನ ಮತ್ತು ಕೌಶಲ್ಯಾಭಿವೃದ್ಧಿ,
ಜೀವನೋಪಾಯ ಹಾಗೂ ಉದ್ಯಮಶೀಲತೆ ಸಚಿವರು.